# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1107 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 28-12-2022. |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ರಸ್ತೆಯಲ್ಲಿ ಓವರ್ ಸ್ಪೀಡ್ ಸೇರಿದಂತೆ ಇನ್ನಿತರ ಕಾರಣಗಳಿಂದಾಗಿ ಅಪಘಾತಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು-ಮೈಸೂರು (ರಾಷ್ಟ್ರೀಯ ಹೆದ್ದಾರಿ-275) ದಶಪಥ ರಸ್ತೆಯು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಇವರ ಸುಪರ್ದಿಯಲ್ಲಿರುತ್ತದೆ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಈ ಕೆಳಕಂಡಂತೆ ವರದಿಸಿರುತ್ತಾರೆ. |
| ಆ) | ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇ ರಸ್ತೆಯನ್ನು 6 ಪಥದ ಮುಖ್ಯ ಕ್ಯಾರೇಜ್‌ವೇ ಹೊಂದಿದ್ದು 2 ಬದಿಗಳಲ್ಲಿ 2 ಪಥದ ಸರ್ವೀಸ್ ರಸ್ತೆಯೊಂದಿಗೆ ಪ್ರವೇಶ ನಿಯಂತ್ರಣ ರಸ್ತೆಯಾಗಿರುತ್ತದೆ.<br><br>ಸದರಿ ಎಕ್ಸ್‌ಪ್ರೆಸ್‌ವೇ ಯನ್ನು ಗರಿಷ್ಠ ಮಿತಿ ಗಂಟೆಗೆ 100 ಕಿ.ಮೀ. ವೇಗಕ್ಕೆ ವಿನ್ಯಾಸಗೊಳಿಸಲಾಗಿರುತ್ತದೆ ಹಾಗೂ ರಸ್ತೆ ಸುರಕ್ಷತಾ ವಿನ್ಯಾಸಿತ ವೇಗ ಗಂಟೆಗೆ 100 ಕಿ.ಮೀ. ಗಿಂತ ಹೆಚ್ಚಿನ ವೇಗದಲ್ಲಿ ಕೆಲವು ವಾಹನಗಳು ಸಂಚರಿಸುವ ಕಾರಣ ಅಲ್ಲದೆ, ಮುಖ್ಯ ಕ್ಯಾರೇಜ್‌ವೇ 2 ಬದಿಗಳಲ್ಲಿ ನಿರ್ಮಿಸಲಾಗಿರುವ ಫೆನ್ಸಿಂಗ್ ಗಳನ್ನು ಸ್ಥಳೀಯರು ಅನಧಿಕೃತವಾಗಿ ತುಂಡರಿಸಿ ರಸ್ತೆಯನ್ನು ದಾಟುತ್ತಿರುವ ಕಾರಣ ಅಪಘಾತಗಳು ಸಂಭವಿಸುತ್ತಿವೆ. ಅಪಘಾತಗಳನ್ನು ನಿಯಂತ್ರಿಸಲು ರಿಯಾಯಿತಿದಾರರು ತುಂಡರಿಸಿದ ಫೆನ್ಸಿಂಗ್‌ಗಳನ್ನು ನಿಯಮಿತವಾಗಿ ಸರಿಪಡಿಸಲು ಕ್ರಮವಹಿಸುತ್ತಿದ್ದಾರೆ ಹಾಗೂ ಎಲ್ಲಾ ರೀತಿಯ ಸುರಕ್ಷತಾ ಕ್ರಮಗಳನ್ನು ವಹಿಸಲಾಗುತ್ತಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಇ) | 2022ರ ಸೆಪ್ಟೆಂಬರ್ ನಂತರ ಈ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಟ್ಟ ನಂತರ ಎಷ್ಟು ಅಪಘಾತಗಳಾಗಿವೆ ಹಾಗೂ ಎಷ್ಟು ಜನ ಮೃತಪಟ್ಟಿದ್ದಾರೆ; (ವಿವರ ನೀಡುವುದು) | ಸದರಿ ಹೆದ್ದಾರಿಯಲ್ಲಿ ಸೆಪ್ಟೆಂಬರ್-2022 ರ ನಂತರ ರಸ್ತೆಯನ್ನು ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟ ನಂತರ ಈವರೆಗೆ ಸಂಭವಿಸಲಾದ ಅಪಘಾತಗಳ ವಿವರಗಳನ್ನು ಈ ಕೆಳಕಂಡಂತೆ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ.<br><br>Month / Accidents / Fatality:<br>September 2022 / 71 / 17<br>October 2022 / 87 / 17<br>November 2022 / 61 / 8 |

| | | |
|---|---|---|
| ಈ) | ಈ ರಾಷ್ಟ್ರೀಯ ಹೆದ್ದಾರಿ ರಸ್ತೆಯು ಅವೈಜ್ಞಾನಿಕ ಮತ್ತು ಕಳಪೆ ಕಾಮಗಾರಿಗಳಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಯನ್ನು ಐ.ಆರ್.ಸಿ ಮಾನದಂಡಗಳಂತೆ ಹಾಗೂ ಕೇಂದ್ರ ಭೂಸಾರಿಗೆ ಮಂತ್ರಾಲಯದಿಂದ ಹೊರಡಿಸುವ ಮಾರ್ಗಸೂಚಿ ಅನ್ವಯ ನಿರ್ವಹಿಸಲಾಗುತ್ತದೆ. ಸದರಿ ಯೋಜನೆಯ ಗುಣಮಟ್ಟದ ಕುರಿತು ಖಾತರಿಪಡಿಸಿಕೊಳ್ಳಲು ರಾಷ್ಟ್ರೀಯ ಮಟ್ಟದ 3rd ಪಾರ್ಟಿಯಿಂದ ಗುಣಮಟ್ಟದ ಪರಿವೀಕ್ಷಣೆ ಕೈಗೊಳ್ಳಲಾಗಿದ್ದು, ಎಲ್ಲಾ ತರಹದ ಗುಣಮಟ್ಟದ ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಕಳಪೆ ಗುಣ ಮಟ್ಟದ ಕಾಮಗಾರಿ ಕೈಗೊಂಡಿರುವುದಿಲ್ಲ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 450 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು